# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 727 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 21/08/2026 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಧಿಕ ಸಂಖ್ಯೆಯ ವಿದ್ಯಾರ್ಥಿಗಳನ್ನು ಹೊಂದಿರುವ ಸಿಂಧನೂರು ತಾಲ್ಲೂಕಿನಲ್ಲಿ ಈವರೆಗೆ ಸರ್ಕಾರಿ ಐ.ಟಿ.ಐ ಕಾಲೇಜು ಮಂಜೂರಾಗದಿರಲು ಕಾರಣವೇನು; | ಪ್ರಸ್ತುತ ಸಿಂಧನೂರಿನಲ್ಲಿ 01 ಖಾಸಗಿ ಅನುದಾನಿತ ಮತ್ತು 02 ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿವೆ. ಅಲ್ಲದೆ ಸಿಂಧನೂರಿನಿಂದ 25 ಕಿ.ಮಿ. ದೂರದಲ್ಲಿರುವ ಮಾನ್ವಿಯಲ್ಲಿ 1 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ.<br><br>ರಾಜ್ಯದಲ್ಲಿ ಪ್ರಸ್ತುತ 270 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 2014-15ನೇ ಸಾಲಿನಲ್ಲಿ 100 ಹಾಗೂ 2017-18 ನೇ ಸಾಲಿನಲ್ಲಿ 12 ಹೊಸ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸಿದ್ದು, ಈ ಸಂಸ್ಥೆಗಳಿಗೆ ಮೂಲಭೂತ ಸೌಲಭ್ಯಗಳಾದ ಕಟ್ಟಡ, ಯಂತ್ರೋಪಕರಣಗಳನ್ನು ಒದಗಿಸುವುದು ಮತ್ತು ರಾಜ್ಯದ ಎಲ್ಲಾ 270 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಅಗತ್ಯವಿರುವ ಸಿಬ್ಬಂದಿಗಳನ್ನು ಒದಗಿಸುವುದು ಆದ್ಯತೆಯಾಗಿರುವುದರಿಂದ ಪ್ರಸ್ತುತ ಹೊಸದಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸುವ ಉದ್ದೇಶವಿರುವುದಿಲ್ಲ. |
| ಆ) | ಸರ್ಕಾರಿ ಐ.ಟಿ.ಐ ಕಾಲೇಜನ್ನು ಮಂಜೂರು ಮಾಡಲು ಸರ್ಕಾರದಿಂದ ಅನುಸರಿಸಲಾಗುತ್ತಿರುವ ಮಾನದಂಡಗಳೇನು; | ಡಿ.ಜಿ.ಇ.ಟಿ. ನವದೆಹಲಿ ಇವರು ನಿಗಧಿಪಡಿಸಿರುವ ಸಂಯೋಜನಾ 2025ರ ಮಾನದಂಡಗಳನ್ನು (Affiliation Norms – 2025) ಅನುಸರಿಸಬೇಕಾಗಿರುತ್ತದೆ. |
| ಇ) | ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕಿಗೆ ಯಾವ ಕಾಲಮಿತಿಯೊಳಗೆ ಸರ್ಕಾರದಿಂದ ಐ.ಟಿ.ಐ ಕಾಲೇಜು ಮಂಜೂರು ಮಾಡಲಾಗುವುದು? | ಪ್ರಸ್ತುತ ಹೊಸದಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸುವ ಉದ್ದೇಶವಿರುವುದಿಲ್ಲ. |

**ಸಂಖ್ಯೆ: ಕೌಉಜೀಇ 63 ಕೈತಪ್ರ 2026**

(ಡಾ. ಶರಣಪ್ರಕಾಶ ಆರ್ ಪಾಟೀಲ)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.